ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER: 　　ದಿನಾಂಕ : DATE : 2/12/20

# ಶಾಸಕರು, ಸಂಸದರ ವಿರುದ್ಧದ ಕೇಸ್ ವಾಪಸ್: ನೋಟಿಸ್

**ಬೆಂಗಳೂರು:** ಶಾಸಕರು ಹಾಗೂ ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳನ್ನು ಕೈಬಿಟ್ಟ ಸಚಿವ ಸಂಪುಟದ ತೀರ್ಮಾನ ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಈ ಕುರಿತು ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ (ಪಿಯುಸಿಎಲ್) ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ಅವರ ನೇತೃತ್ವದ ವಿಭಾಗೀಯ ನ್ಯಾಯಪೀಠದ ಮುಂದೆ ಮಂಗಳವಾರ ವಿಚಾರಣೆಗೆ ಬಂದಿತ್ತು.

ವಾದ ಆಲಿಸಿದ ನ್ಯಾಯಪೀಠ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಪ್ರಧಾನ ಕಾರ್ಯದರ್ಶಿ, ರಾಜ್ಯ ಪೊಲೀಸ್ ಮಹಾನಿರ್ದೇಶಕರು ಹಾಗೂ ಅಭಿಯೋಜನೆ ಇಲಾಖೆಯ ನಿರ್ದೇಶಕರಿಗೆ ನೋಟೀಸ್ ಜಾರಿಗೊಳಿಸಿತು. ಅಲ್ಲದೇ ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸುವಂತೆ ಎಲ್ಲಾ ಪ್ರತಿವಾದಿಗಳಿಗೆ ಸೂಚಿಸಿ ವಿಚಾರಣೆಯನ್ನು ಡಿ.21ಕ್ಕೆ ಮುಂದೂಡಿತು.